# ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

**(ಕರ್ನಾಟಕ ಸರ್ಕಾರದ ಒಂದು ಉದ್ದಿಮೆ)**

**ವಿಳಾಸ: "ವನವಿಕಾಸ", 1ನೇ ಮಹಡಿ, 18ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು-560 003**

## ನೇಮಕಾತಿಗಾಗಿ ಅಧಿಸೂಚನೆ

ಸಂಖ್ಯೆ:ಕಅನಿನಿ/ಎ1(ಬಿ)/FM&CAO/2017-18/ **1956** ದಿನಾಂಕ:11.12.2017

ನಿಗಮದಲ್ಲಿ ವೇತನ ಶ್ರೇಣಿ 36300-900-39000-1050-45300-1200-52500-1350-53850ರ ಹಾಗೂ ಸರ್ಕಾರವು ನಿಯಮಾನುಸಾರ ಕಾಲಾನುಕಾಲಕ್ಕೆ ನೀಡಲ್ಪಡುವ ಇನ್ನಿತರೆ ಭತ್ಯೆಗಳನ್ನೊಳಗೊಂಡಂತೆ ವಿತ್ತ ವ್ಯವಸ್ಥಾಪಕರು ಮತ್ತು ಮುಖ್ಯ ಲೆಕ್ಕಾಧಿಕಾರಿಯ **ಒಂದು** ಖಾಲಿ ಹುದ್ದೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**1.0 ಅರ್ಜಿ ನಮೂನೆ**

ಅಭ್ಯರ್ಥಿಗಳು ಅಧಿಸೂಚನೆ ಹಾಗೂ ನಿಗದಿತ ಅರ್ಜಿ ನಮೂನೆಯನ್ನು ನಿಗಮದ ವೆಬ್‌ಸೈಟ್: **www.kfdcl.kar.nic.in** ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ನಿಗದಿತ ನಮೂನೆಯ ಅರ್ಜಿಯಲ್ಲಿ ಮಾಹಿತಿಗಳನ್ನು ಆಂಗ್ಲ ಭಾಷೆಯ Capital letters ಗಳಲ್ಲಿ ಅಥವಾ ಕನ್ನಡ ಭಾಷೆಯ ದಪ್ಪ ಅಕ್ಷರಗಳಲ್ಲಿ ಸ್ಪಷ್ಟವಾಗಿ ಬರೆದು ಅಥವಾ ಬೆರಳಚ್ಚು ಮಾಡಿಸಿ ಸಲ್ಲಿಸತಕ್ಕದ್ದು. **ಅರ್ಜಿ ನಮೂನೆಗಳು ಮಾರಾಟಕ್ಕೆ ಲಭ್ಯವಿರುವುದಿಲ್ಲ.**

**2.0 ಅರ್ಜಿ ಸಲ್ಲಿಸುವ ವಿಧಾನ ಮತ್ತು ಸಲ್ಲಿಸಬೇಕಾದ ವಿಳಾಸ**

**2.1** ನಿಗದಿತ ನಮೂನೆಯ ಅರ್ಜಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಪೂರ್ಣವಾಗಿ ಭರ್ತಿ ಮಾಡಿ, ಭರ್ತಿ ಮಾಡಿದ ಅರ್ಜಿಯನ್ನು ಲಕೋಟೆಯಲ್ಲಿರಿಸಿ, ಲಕೋಟೆಯ ಮೇಲೆ **"ವಿತ್ತ ವ್ಯವಸ್ಥಾಪಕರು ಮತ್ತು ಮುಖ್ಯ ಲೆಕ್ಕಾಧಿಕಾರಿ ಹುದ್ದೆಗೆ ಅರ್ಜಿ"** ಎಂದು ಸ್ಪಷ್ಟವಾಗಿ ನಮೂದಿಸಿ, ತಕ್ಕ ಮೌಲ್ಯದ ಅಂಚೆ ಚೀಟಿ ಅಂಟಿಸಿ, **ಸಾಧಾರಣ ಅಂಚೆ ಮುಖಾಂತರ ಮಾತ್ರ** ಈ ಕೆಳಗೆ ನಮೂದಿಸಿರುವ ವಿಳಾಸಕ್ಕೆ ಕಳುಹಿಸಬೇಕು.

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು**
**ವ್ಯವಸ್ಥಾಪಕ ನಿರ್ದೇಶಕರು,**
**ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ,**
**1ನೇ ಮಹಡಿ, ವನವಿಕಾಸ, 18ನೇ ಕ್ರಾಸ್,**
**ಮಲ್ಲೇಶ್ವರಂ, ಬೆಂಗಳೂರು-560003.**

ಇತರೆ ನಮೂನೆಗಳಲ್ಲಿ ಭರ್ತಿ ಮಾಡಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಒಂದು ವೇಳೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಸಲ್ಲಿಸಿ, ಅಂಚೆ ಮೂಲಕ ಸ್ವೀಕೃತವಾಗದೇ ಇದ್ದಲ್ಲಿ ಆಯ್ಕೆ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ. ಅರ್ಜಿ ತಲುಪಿದ ಬಗ್ಗೆ ಯಾವುದೇ ಸ್ವೀಕೃತಿಯನ್ನು ನೀಡಲಾಗುವುದಿಲ್ಲ. ಯಾವುದೇ ಕಾರಣಕ್ಕೂ ಕೊರಿಯರ್, ನೊಂದಾಯಿತ ಅಂಚೆ, ಮುದ್ದಾಂ, ಇತ್ಯಾದಿ ವಿಧಾನಗಳ ಮುಖಾಂತರ ಅರ್ಜಿಗಳನ್ನು ಕಳುಹಿಸಬಾರದು ಮತ್ತು ಈ ವಿಧಾನಗಳ ಮುಖಾಂತರ ಕಳುಹಿಸಿದ ಅರ್ಜಿಗಳನ್ನು ಸ್ವೀಕರಿಸುವ ವ್ಯವಸ್ಥೆ ಸಹ ಇರುವುದಿಲ್ಲ.

**2.2** ಅಭ್ಯರ್ಥಿಯು ನಿಗದಿತ ನಮೂನೆಯಲ್ಲಿರುವ ಅರ್ಜಿಯನ್ನು ಭರ್ತಿ ಮಾಡುವ ವೇಳೆಗೆ ಸಂಬಂಧಿಸಿದ ಪ್ರಾಧಿಕಾರಗಳಿಂದ ಅವಶ್ಯಕವಿರುವ ಎಲ್ಲಾ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪಡೆದುಕೊಂಡು ಸದರಿ ಮೂಲ ದಾಖಲೆ/ಪ್ರಮಾಣ ಪತ್ರಗಳಲ್ಲಿರುವ ಮಾಹಿತಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಸಮರ್ಪಕವಾಗಿ ನಿಗದಿತ ನಮೂನೆಯ ಅರ್ಜಿಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

**2.3** ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ – **15.12.2017**
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ – **05.01.2018**

**ವಿಶೇಷ ಸೂಚನೆ:-** ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸ್ವೀಕೃತವಾದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದಿಲ್ಲ.

**2.4 ಶುಲ್ಕ (Fee):**
**ಯಾವುದೇ ರೀತಿಯ ಶುಲ್ಕವನ್ನು ಅಭ್ಯರ್ಥಿಗಳು ಪಾವತಿಸಬೇಕಾಗಿರುವುದಿಲ್ಲ.**

**2.5 ಲಿಖಿತ ಪರೀಕ್ಷೆ:**
**ಯಾವುದೇ ರೀತಿಯ ಲಿಖಿತ ಪರೀಕ್ಷೆ ಇರುವುದಿಲ್ಲ.**

**3.0 ಅರ್ಹತೆ ಮತ್ತು ನಿಬಂಧನೆಗಳು**

**3.1 ವಿದ್ಯಾರ್ಹತೆ:** ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಈ ಕೆಳಕಂಡ ವಿದ್ಯಾರ್ಹತೆಯನ್ನು ಅಭ್ಯರ್ಥಿಯು ಕಡ್ಡಾಯವಾಗಿ ಹೊಂದಿರಬೇಕು.

1. ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾಲಯದ ಬಿ.ಕಾಂ ಪಧವೀಧರರಾಗಿರಬೇಕು.
2. ಇನ್ಸ್‌ಸ್ಟಿಟ್ಯೂಟ್ ಆಪ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾದ ಸಹ ಸದಸ್ಯರಾಗಿರಬೇಕು.

**ಅಪೇಕ್ಷಣೀಯ:**

3. ಕಾನೂನು ಪದವಿ.
4. ಪ್ರಮುಖ ಸಂಸ್ಥೆಯಲ್ಲಿ ಸಮಾನ ಹುದ್ದೆಯಲ್ಲಿ 5 ವರ್ಷಗಳ ಅನುಭವ ಹೊಂದಿರಬೇಕು.

**3.2 ವಯೋಮಿತಿ:**
ಅರ್ಜಿಯನ್ನು ಆಹ್ವಾನಿಸಿ ಜಾರಿ ಮಾಡಲಾಗಿರುವ ಈ ಅಧಿಸೂಚನೆಯ ದಿನಾಂಕಕ್ಕೆ ಅಭ್ಯರ್ಥಿಯು 45 ವರ್ಷಗಳ ವಯಸ್ಸನ್ನು ಮೀರಿರಬಾರದು.

**4.0 ಗಮನಿಸಬೇಕಾದ ಬಹು ಮುಖ್ಯ ಅಂಶಗಳು**

| | |
|---|---|
| **4.1** | ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ. |
| **4.2** | ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳತಕ್ಕದ್ದು. |
| **4.3** | ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ವಿವರಗಳಿಗೆ ಪೂರಕ ದಾಖಲೆಗಳ ಪ್ರತಿಗಳನ್ನು ಅರ್ಜಿಯೊಂದಿಗೆ ತಪ್ಪದೆ ಸಲ್ಲಿಸತಕ್ಕದ್ದು. |
| **4.4** | ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು ನಿಗದಿತ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಈ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು. |
| **4.5** | ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಅಭ್ಯರ್ಥಿ ಸಹಿ ಇಲ್ಲದ ಮತ್ತು ಅಭ್ಯರ್ಥಿಯ ಭಾವಚಿತ್ರ ಅಂಟಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ತತ್ಸಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ. |
| **4.6** | ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಹಾಗೂ ಸಮಯದ ನಂತರ ಸ್ವೀಕೃತವಾದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಅಥವಾ ಸ್ವೀಕೃತವಾಗದೇ ಇರುವುದಕ್ಕೆ ಆಯ್ಕೆ ಪ್ರಾಧಿಕಾರವು ಜವಾಬ್ದಾರಿಯಲ್ಲ. |
| **4.7** | ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ. |
| **4.8** | ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಯು ಸಲ್ಲಿಸಿದ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |

| | |
|---|---|
| 4.9 | ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು. |
| 4.10 | ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ. |
| 4.11 | ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ. |
| 4.12 | ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ. |
| 4.13 | ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳಾ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ. |
| 4.14 | ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳು ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ. |
| 4.15 | ಅಭ್ಯರ್ಥಿಯು ತಪ್ಪು ಮಾಹಿತಿಗಳನ್ನು ಅರ್ಜಿಯಲ್ಲಿ ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು. |
| 4.16 | ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಪುಗಳು, ಸರಕಾರದ ನಿರ್ದೇಶನಗಳು, ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ. |

ಸ್ಥಳ : **ಬೆಂಗಳೂರು**
ದಿನಾಂಕ : 11.12.2017

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
**ಮತ್ತು ವ್ಯವಸ್ಥಾಪಕ ನಿರ್ದೇಶಕರು,**
**ಕ.ಅ.ಅ.ನಿ.ನಿ., ಬೆಂಗಳೂರು.**

**ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು**
**(ಕರ್ನಾಟಕ ಸರ್ಕಾರದ ಒಂದು ಉದ್ದಿಮೆ)**

# ವಿತ್ತ ವ್ಯವಸ್ಥಾಪಕ & ಮುಖ್ಯ ಲೆಕ್ಕಾಧಿಕಾರಿ ಹುದ್ದೆಗೆ ಅರ್ಜಿ

ಅಧಿಸೂಚನೆ ಸಂಖ್ಯೆ:ಕಅಅನಿನಿ.ಎ1(ಬಿ).FM&CAO/2017-18/**1956** ದಿನಾಂಕ.11.12.2017

**ಅಧಿಸೂಚನೆ ದಿನಾಂಕ 11.12.2017ರ ನಂತರ ತೆಗೆಸಿದ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸಿ.**

**<u>ಅರ್ಜಿಯನ್ನು ಭರ್ತಿ ಮಾಡಲು ಸೂಚನೆಗಳು:</u>**

i) ಕನ್ನಡ ಭಾಷೆಯ ದಪ್ಪ ಅಥವಾ ಆಂಗ್ಲ ಭಾಷೆಯ Capital ಅಕ್ಷರಗಳಲ್ಲಿ ಭರ್ತಿ ಮಾಡಬೇಕು
ii) ಅಪೂರ್ಣ/ತಪ್ಪು/ಅಸ್ಪಷ್ಟ/ಸುಳ್ಳು ಮಾಹಿತಿ ಭರ್ತಿ ಮಾಡಬಾರದು.
iii) ಅರ್ಜಿಯನ್ನು ಸ್ಪಷ್ಟವಾಗಿ ಭರ್ತಿ ಮಾಡಬೇಕು

1 ಅಭ್ಯರ್ಥಿಯ ಹೆಸರು

2 ತಂದೆಯ / ಗಂಡನ / ಪೋಷಕರ ಹೆಸರು

3 ಪತ್ರ ವ್ಯವಹಾರಕ್ಕಾಗಿ ಪೂರ್ಣ ವಿಳಾಸ
(ಅಭ್ಯರ್ಥಿಯ ಹೆಸರು ಹೊರತುಪಡಿಸಿ)

ಪಿನ್ ಕೋಡ್

4 ಅಭ್ಯರ್ಥಿಯ ಸ್ಥಿರ / ಮೊಬೈಲ್ ದೂರವಾಣಿ ಸಂಖ್ಯೆ

ದಿನ ತಿಂಗಳು ವರ್ಷ

5 ಜನ್ಮ ದಿನಾಂಕ - -

6 ಲಿಂಗ (ಸೂಕ್ತ ಅಂಕಣವನ್ನು √ ಮಾಡಿ) ☐ ಪುರುಷ ☐ ಸ್ತ್ರೀ

7 ವಿದ್ಯಾರ್ಹತೆ (ಸೂಕ್ತ ಅಂಕಣವನ್ನು √ ಮಾಡಿ)
☐ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾಲಯದಿಂದ ಪಡೆದ ಬಿ.ಕಾಂ. ಪದವಿ ಪರೀಕ್ಷೆಯಲ್ಲಿ ತೇರ್ಗಡೆ.
☐ ICAI ಸದಸ್ಯತ್ವ ☐ ಸದಸ್ಯತ್ವ ಸಂಖ್ಯೆ
☐ ತೇರ್ಗಡೆಯಾದ ವರ್ಷ

8 ಅಪೇಕ್ಷಣೀಯ
☐ ಕಾನೂನು ಪದವಿ
☐ ಪ್ರಮುಖ ಸಂಸ್ಥೆಗಳಲ್ಲಿ ಐದು ವರ್ಷಗಳ ಅನುಭವ.

ನಿಗದಿಪಡಿಸಿದ ಗರಿಷ್ಠ ಅಂಕಗಳು ಗಳಿಸಿದ ಒಟ್ಟು ಅಂಕಗಳು

9 ಅಂಕಗಳು: ಬಿ.ಕಾಂ ಪರೀಕ್ಷೆ

10 ಕನ್ನಡ ಭಾಷೆಯ ಪರಿಜ್ಞಾನ ☐ ಓದಲು ☐ ಬರೆಯಲು ☐ ಮಾತನಾಡಲು

## <u>ಘೋಷಣಾ ಪತ್ರ</u>

ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ವಿವರಗಳು ನನ್ನ ತಿಳುವಳಿಕೆ ಮಟ್ಟಿಗೆ ಸತ್ಯ ಹಾಗೂ ಪರಿಪೂರ್ಣವೆಂದು ನಂಬಿರುತ್ತೇನೆ. ಯಾವುದಾದರೂ ತಪ್ಪು / ಸುಳ್ಳು ಮಾಹಿತಿ ನೀಡಿರುವುದು ಕಂಡು ಬಂದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸುವ, ಒಂದು ವೇಳೆ ಬ್ಯಾಕ್‌ಲಾಗ್ ಹುದ್ದೆಗೆ ನೇಮಕಾತಿಯಾದಲ್ಲಿ ನನ್ನನ್ನು ಸೇವೆಯಿಂದ ಯಾವುದೇ ಮುನ್ಸೂಚನೆ ಇಲ್ಲದೆ ವಜಾ ಮಾಡುವ ಹಾಗೂ ನನ್ನ ವಿರುದ್ಧ ತತ್ಸಂಬಂಧ ಕ್ರಿಮಿನಲ್ ಕ್ರಮ ಕೈಗೊಳ್ಳಲು ಇಲಾಖೆಗೆ ಅಧಿಕಾರವಿದೆಯೆಂದು ತಿಳಿದಿದ್ದೇನೆ. ಅಲ್ಲದೆ, ನಾನು ಈವರೆಗೆ ಯಾವುದೇ ಕಾನೂನು / ಕ್ರಿಮಿನಲ್ ಮೊಕದ್ದಮೆಗಳನ್ವಯ ವಿಚಾರಣೆಗೆ / ಶಿಕ್ಷೆಗೆ ಒಳಪಟ್ಟಿಲ್ಲವೆಂದು ಸಹ ದೃಢೀಕರಿಸುತ್ತೇನೆ.

ಸ್ಥಳ:
ದಿನಾಂಕ: **ಅಭ್ಯರ್ಥಿಯ ಸಹಿ**